1	2	3
IX. HOMBEGOWDANAGAR KHO-KHO STADIUM		
A.	Civil	43.00
B.	Electrical works	3.55
X. SULIVAN POLICE GROUND		
A.	Civil	35.90
B.	Electrical works	1.73

ಸರ್ಕಾರಿ ಐ.ಟಿ.ಐನಲ್ಲಿ ಉಪನ್ಯಾಸಕರ ಕೊರತೆ.

801 - ಶ್ರೀ ಡಿ.ಎಸ್. ಮಾದಪ್ಪ (ಮಡಿಕೇರಿ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಡಿಕೇರಿಯ ಸರ್ಕಾರಿ ಐ.ಟಿ.ಐನಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಇ) ಈ ಐ.ಟಿ.ಐ. ನಲ್ಲಿ ಯಂತ್ರೋಪಕರಣಗಳ ದುರಸ್ತಿಗಾಗಿ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಿ. ಸತ್ಯನಾರಾಯಣ (ಕಾರ್ಮಿಕ ರಾಜ್ಯ ಸಚಿವರು) :

ಅ) ಹೌದು.

ಆ) 8 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. 2 ಹುದ್ದೆಗಳನ್ನು ಇಷ್ಟರಲ್ಲಿಯೇ ಭರ್ತಿ ಮಾಡಲಾಗುವುದು.

ಇ) ಹೊಸ ಯಂತ್ರೋಪಕರಣಗಳನ್ನು ರೂ.35 ಲಕ್ಷಗಳ ವೆಚ್ಚದಲ್ಲಿ ಖರೀದಿಸಿ ಒದಗಿಸಲಾಗಿದೆ.

ಮಡಿಕೇರಿ ಕ್ಷೇತ್ರದಲ್ಲಿ ರಸ್ತೆಯ ಅಭಿವೃದ್ಧಿ

803 - ಶ್ರೀ ಡಿ.ಎಸ್. ಮಾದಪ್ಪ (ಮಡಿಕೇರಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಡಿಕೇರಿ ವಿಧಾನಸಭಾ ವ್ಯಾಪ್ತಿಗೆ ಸೇರಿದ ಚೆಟ್ಟಿಮಾನಿ, ದಬ್ಬಡ್ಕ, ಕಾಂತಬೈಲು ಕಲ್ಲುಗುಂಡಿ ರಸ್ತೆಯ ಅಭಿವೃದ್ಧಿಯ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?